**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಭಟ್ಕಳ**

**ಸಿಸಿ ನಂಬರಃ 1867/2022**

**ಸಿ.ಡಬ್ಲ್ಯೂಃ 6, ಪಿ.ಡಬ್ಲ್ಯೂಃ 6**

ಸಾಕ್ಷಿದಾರರ ಹೆಸರು : ಯಶೋಧಾ

ತಂದೆಯ ಹೆಸರು : ಮಾದೇವ ಗೊಂಡ

ವಯಸ್ಸು : 37 ವರ್ಷ

ಉದ್ಯೋಗ : ಅಂಗನವಾಡಿ ಶಿಕ್ಷಕಿ

ವಾಸ್ತವ್ಯ : ತಲಾಂದ , ಭಟ್ಕಳ

**ಸಾಕ್ಷಿಗೆ ಪ್ರಮಾಣವಚನ ಭೋದಿಸಲಾಯಿತು , ತಾಃ 12/09 /2025**

**ಮುಖ್ಯ ವಿಚಾರಣೆ : ಸರಕಾರಿ ಸಹಾಯಕ ಅಭಿಯೋಜಕರಿಂದ,**

ನನಗೆ ಸದರಿ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನಾನು ಕಡಸಲಗದ್ದೆ ಅಂಗನವಾಡಿಯಲ್ಲಿ ಶಿಕ್ಷಕಿಯಾಗಿ ಕೆಲಸ ಮಾಡುತ್ತೇನೆ.

**(ಈ ಹಂತದಲ್ಲಿ ಎಪಿಪಿಯವರು ಸದ್ರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು.)**

**ಪಾಟೀ ಸವಾಲು : ಎಪಿಪಿಯವರಿಂದ,**

ಚಾಸಾ 1 ಮತ್ತು 4 ಇವರು ನಾನು ಕೆಲಸ ಮಾಡುವ ಶಾಲೆಯಲ್ಲಿ ಶಿಕ್ಷಕಿಯಾಗಿ ಕೆಲಸ ಮಾಡುತ್ತಿದ್ದಾರೆ. ಸದರಿ ಪ್ರಕರಣದ ಆರೋಪಿಗಳು ಒಂದಲ್ಲಾ ಒಂದು ಕಾರಣಕ್ಕೆ ಶಾಲೆಗೆ ಬಂದು ತೊಂದರೆ ಕೊಡುವ ವಿಷಯ ನನಗೆ ಗೊತ್ತಿದೆ ಎಂದರೆ ಸರಿಯಲ್ಲ. ದಿಃ 06.12.2021 ರಂದು ನಾನು ಶಾಲೆಯಲ್ಲಿ ಇದ್ದಾಗ ದಿಃ 05.12.2021 ರಂದು ಭಾನುವಾರ ರಜೆ ಇದ್ದ ಕಾರಣ ಆ ದಿನ ಶಾಲೆಯ ಆವರಣದಲ್ಲಿರುವ ದೊಡ್ಡ ದೊಡ್ಡ ಆಲದ ಮರಗಳನ್ನು ಕಡಿದಿದ್ದರು ಎಂದರೆ ನನಗೆ ಮಾಹಿತಿ ಇಲ್ಲ. ಆ ಬಗ್ಗೆ ನನಗೆ ಶಾಲೆಯ ಶಿಕ್ಷಕಿಯರು ಮೇಲಾಧಿಕಾರಿಗಳ ಗಮನಕ್ಕೆ ತಂದಿದ್ದರು ಎಂದರೆ ನನಗೆ ಗೊತ್ತಿಲ್ಲ. ದಿಃ 08.12.2022 ರಂದು ಬೆಳಿಗ್ಗೆ 9.00 ಗಂಟೆಗೆ ನಾನು ಅಂಗನವಾಡಿ ಮಕ್ಕಳಿಗೆ ಪಾಠ ಮಾಡುವಾಗ ಶಾಲೆಯ ಆವರಣದಲ್ಲಿ ಸದರಿ ಪ್ರಕರಣದ ಆರೋಪಿಗಳು ಶಿಕ್ಷಕಿಯರಿಗೆ ಪಾಠ ಮಾಡದಂತೆ ತಡೆದಿರುತ್ತಾರೆ ಎಂದರೆ ಸರಿಯಲ್ಲ. ಅಲ್ಲದೆ ಚಾಸಾ 1 ಮತ್ತು 4 ರವರನ್ನು ಕುರಿತು ಮೇಲಾಧಿಕಾರಿಗೆ ತಿಳಿಸಿ ನಿಮಗೆ ವರ್ಗಾವಣೆ ಮಾಡಿಸುತ್ತೇವೆಂದು ಹೇಳಿದ್ದರು ಎಂದರೆ ಸರಿಯಲ್ಲ. 1 ನೇ ಆರೋಪಿ ಚಾಸಾ 1 ಇವರ ಎಡಗೈ ಹಿಡಿದು ಎಳೆದಾಡಿ ನೆಲಕ್ಕೆ ದೂಡಿಹಾಕಿ ಅವರ ಮಾನಕ್ಕೆ ಕುತ್ತು ಬರುವಂತೆ

ವರ್ತನೆ ಮಾಡಿದ್ದರು ಎಂದರೆ ಸರಿಯಲ್ಲ. 3 ನೇ ಆರೋಪಿ ಶಾಲೆಯಲ್ಲಿ ಕುಡಿಯುವ ನೀರಿನ ಪಂಪನ್ನು ಹಾಕಿಸಿಕೊಡುತ್ತೇನೆ ಶಾಲೆಯ ಮಕ್ಕಳಿಂದ ರೂ. 15,000 ವಸೂಲಿ ಮಾಡಿ ನೀಡಿ ಎಂದ ಪೀಡಿಸುತ್ತಿದ್ದರು ಎಂದರೆ ಸರಿಯಲ್ಲ. ನಾನು ಸದರಿ ಶಾಲೆಯಲ್ಲಿ ಅಂಗನವಾಡಿ ಶಿಕ್ಷಕಿಯಾಗಿ ಕೆಲಸ ಮಾಡುತ್ತಿದ್ದರೂ ಸಹ ನನಗೆ ಎಲ್ಲಾ ವಿಷಯ ಗೊತ್ತಿದ್ದರು ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು : ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**( ನನ್ನ ಹೇಳಿಕೆ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು )**

**ಓ.ಹೇ.ಕೇ. ಸರಿ ಇದೆ .**

ಸಹಿ ಇದೆ

**ಪ್ರ.ದ.ನ್ಯಾ.ದಂ., ಭಟ್ಕಳ.**